ಕೇಂದ್ರಕ್ಕೆ ಜಮೀನು ನೀಡಿದ ರೈತರು ಅಸಿಸ್ಟೆಂಟ್ ಕಮೀಷನರ್, ಜಮಖಂಡಿ ರವರ ಕಛೇರಿಯಿಂದ ಪರಿಹಾರ ರೂಪದಲ್ಲಿ ರೂ 3,46880/- ಮೊತ್ತವನ್ನು ದಿನಾಂಕ 10-5-2007 ರಂದು ಮತ್ತು ರೂ 20,154/- ಮೊತ್ತವನ್ನು ದಿನಾಂಕ 18-5-2007 ರಂದು ಪಡೆದಿರುತ್ತಾರೆ

ಪ್ರಶ್ನೆ ಸಂಖ್ಯೆ 71 (210) ಶ್ರೀ ಪ್ರಭಾಕರ ಬಂಗೇರ ಕೆ (ಬೆಳ್ತಂಗಡಿ)

ಮಾನ್ಯ ಪ್ರವಾಸೋದ್ಯಮ ಮತ್ತು ಮೂಲಸೌಲಭ್ಯ ಅಭಿವೃದ್ಧಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೇ

ಅ) ಬೆಳ್ತಂಗಡಿ ಕ್ಷೇತ್ರ ವ್ಯಾಪ್ತಿಯಲ್ಲಿ ಬರುವ ಸೌತಡ್ಕ ಮಹಾಗಣಪತಿ ಮುಕ್ತ ಧಾರ್ಮಿಕ ಪ್ರೇಕ್ಷಣೀಯ ಸ್ಥಳಕ್ಕೆ ರಾಜ್ಯ ಮತ್ತು ಹೊರರಾಜ್ಯಗಳ ಪ್ರವಾಸಿಗರು ಮತ್ತು ಭಕ್ತ ಜನರು ಅಧಿಕ ಸಂಖ್ಯೆಯಲ್ಲಿ ಭೇಟಿ ನೀಡುತ್ತಿದ್ದು ಮೂಲಭೂತ ಸೌಕರ್ಯಗಳನ್ನು ಇಲಾಖೆಯವರು ಒದಗಿಸಿಕೊಡಲು ಸರ್ಕಾರವು ಮುಂದಾಗುವುದೆ,

ಆ) ಈ ಕ್ಷೇತ್ರದ ದೇವಾಲಯವು ಯಾವುದೇ ಕಟ್ಟಡಗಳನ್ನು ಹೊಂದಿರದಿರುವ ಮುಕ್ತ ದೇವಳವಾಗಿದೆ, ಅಲ್ಲಿನ ಪ್ರಕೃತಿ ಸೌಂದರ್ಯವನ್ನು ನೋಡಲು ಕೂಡ ಹೆಚ್ಚಿನ ಜನರು ಭೇಟಿ ನೀಡುತ್ತಿರುವ ಕಾರಣ ಅತಿಥಿಗೃಹ ಕುಡಿಯುವ ನೀರಿನ ವ್ಯವಸ್ಥೆ ಮುಂತಾದ ಅವಶ್ಯಕ ವ್ಯವಸ್ಥೆಗಳನ್ನು ಇಲಾಕೆಯು ಒದಗಿಸಿಕೊಡಲು ಸರ್ಕಾರ ಕ್ರಮಕೈಗೊಳ್ಳುವುದೇ?

ಶ್ರೀ ಬಿ ಶ್ರೀರಾಮಲು

ಅ) ಹೌದು

ಆ) ಭೇಟಿ ನೀಡುತ್ತಿರುವ ಪ್ರವಾಸಿಗರ ಅಂಕಿ ಸಂಖ್ಯೆಯನ್ನು ಗಮನಿಸಿ

ಅಗತ್ಯ ಮೂಲಭೂತ ಸೌಲಭ್ಯ ಒದಗಿಸಲು ಕ್ರಮ ಕೈಗೊಳ್ಳಲಾಗುವುದು ಹಾಗೂ ಕಾಮಗಾರಿಗಳನ್ನು ನಿರ್ಮಿಸಲು ಅಗತ್ಯವಾದ ಜಮೀನು/ನಿವೇಶನಗಳನ್ನು ಇಲಾಖೆಗೆ ಒದಗಿಸಲು ಜಿಲ್ಲಾ ಆಡಳಿತಕ್ಕೆ ಪತ್ರ ಬರೆದು ನಿವೇಶನ ದೊರೆತ ನಂತರ ಮುಂದಿನ ಕ್ರಮ ಕೈಗೊಳ್ಳಲಾಗುವುದು

ಪ್ರಶ್ನೆ ಸಂಖ್ಯೆ 72 (181) ಶ್ರೀ ರಾಮಲಿಂಗರೆಡ್ಡಿ (ಜಯನಗರ)

ಮಾನ್ಯ ಗೃಹ, ಕಾನೂನು, ನ್ಯಾಯ ಮತ್ತು ಮಾನವ, ಹಕ್ಕುಗಳು ಹಾಗೂ ಸಂಸದೀಯ ವ್ಯವಹಾರಗಳ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೇ

ಅ ರಾಜ್ಯದಲ್ಲಿ ಅದರಲ್ಲೂ ಬೆಂಗಳೂರು ನಗರದಲ್ಲಿ ಹೆಲ್ಮೆಟ್ ಕಡ್ಡಾಯಗೊಳಿಸಿರುವುದನ್ನು ದ್ವಿಚಕ್ರ ವಾಹನ ಚಾಲಕರು ವಿರೋಧಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ,

ಆ ಬೆಂಗಳೂರು ನಗರದಲ್ಲಿ ವಾಹನಗಳ ದಟ್ಟಣೆಯಿಂದ ದ್ವಿಚಕ್ರ ವಾಹನಗಳು ನಿಧಾನವಾಗಿ ಸಂಚರಿಸುತ್ತಿರಜುವುದರಿಂದ, ಹೆಲ್ಮೆಟ್ ಕಡ್ಡಾಯ ಗೊಳಿಸಿರುವುದನ್ನು ರದ್ದುಗೊಳಿಸಲು ಸರ್ಕಾರ ಆಲೋಚಿಸಿದೆಯೇ,

ಇ ತಮಿಳುನಾಡಿನಲ್ಲಿ ಹೆಲ್ಮೆಟ್ ಕಡ್ಡಾಯಗೊಳಿಸಿ, ಸಾರ್ವಜನಿಕ ಒತ್ತಾಯದ ಮೇರೆಗೆ ರದ್ದು ಗೊಳಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ,

ಈ ಹೆಲ್ಮೆಟ್ ಕಡ್ಡಾಯದಿಂದ ದ್ವಿಚಕ್ರ ವಾಹನ ಚಾಲಕರಿಗೆ ಆಗುತ್ತಿರುವ ತೊಂದರೆ, ಕಿರುಕುಳವನ್ನು ತಪ್ಪಿಸಲು ಸರ್ಕಾರ ದ್ವಿಚಕ್ರ ವಾಹನ ಚಾಲಕರ ಮನವಿಗೆ ಸ್ಪಂದಿಸುತ್ತದೆಯೇ?

ಶ್ರೀ ಎಂ ಪಿ ಪ್ರಕಾಶ್

ಅ) ಇಲ್ಲ

ಆ) ಇಲ್ಲ